## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1332
**ಮಾನ್ಯ ಸದಸ್ಯರ ಹೆಸರು** : ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 19.08.2025
**ಉತ್ತರಿಸಬೇಕಾದ ಸಚಿವರು** : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

| ಪ್ರಶ್ನೆ. ಸಂ | **ಪ್ರಶ್ನೆ** | **ಉತ್ತರ** |
|---|---|---|
| ಅ) | ರಾಜ್ಯದಲ್ಲಿ ಹದಿಹರೆಯದ ಹೆಣ್ಣು ಮಕ್ಕಳು ಗರ್ಭಧಾರಣೆ ಹೆರಿಗೆ ಮತ್ತು ಅಸುರಕ್ಷಿತ ಗರ್ಭಪಾತದಿಂದ ಸಾವಿಗೀಡಾಗುತ್ತಿರುವ ಕಳವಳಕಾರಿ ಅಂಶಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಕಳೆದ 5 ವರ್ಷಗಳಲ್ಲಿ ಬೆಳಕಿಗೆ ಬಂದಿರುವ ಇಂತಹ ಪ್ರಕರಣಗಳೆಷ್ಟು | ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಹದಿಹರೆಯದ ತಾಯಂದಿರ ಮರಣಗಳ ವಿವರ ಕೆಳಕಂಡಂತಿದೆ.<br><table><tr><th>ಸಾಲು</th><th>ಹದಿಹರೆಯದ ತಾಯಂದಿರ ಸಾವುಗಳ ಸಂಖ್ಯೆ</th></tr><tr><td>2020-21</td><td>12</td></tr><tr><td>2021-22</td><td>18</td></tr><tr><td>2022-23</td><td>18</td></tr><tr><td>2023-24</td><td>17</td></tr><tr><td>2024-25</td><td>7</td></tr><tr><td>ಒಟ್ಟು</td><td>72</td></tr></table> |
| ಇ) | ಲಿಂಗತಾರತಮ್ಯ, ಬಾಲ್ಯ ವಿವಾಹ, ಬಡತನ ಮತ್ತು ಶಿಕ್ಷಣದ ಕೊರತೆ ಈ ರೀತಿ ಒಂದಕ್ಕೊಂದು ಸಂಬಂಧ ಹೊಂದಿರುವ ಇಂತಹ ಗಂಭೀರ ಸಮಸ್ಯೆಯ ಅರಿವು ಮೂಡಿಸುವಲ್ಲಿ ಹಾಗೂ ಸಂಪೂರ್ಣ ನಿರ್ಮೂಲನೆ ಮಾಡಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ತೆಗೆದುಕೊಂಡಿರುವ ಕ್ರಮಗಳೇನು? | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕೈಗೊಂಡಿರುವ ಕ್ರಮಗಳು:**<br>• ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮದಡಿ (RKSK) ಕಾರ್ಯ ನಿರ್ವಹಿಸುತ್ತಿರುವ ಆಪ್ತ ಸಮಾಲೋಚಕರುಗಳು ತಮ್ಮ ಶಾಲಾ ಭೇಟಿಯ ಸಮಯದಲ್ಲಿ ಹದಿಹರೆಯದವರ ವಿಷಯಗಳಾದ ಪೋಷಣೆ, ಮುಟ್ಟಿನ ನಿರ್ವಹಣೆ, ಅಸಂಕ್ರಾಮಿಕ ರೋಗಗಳು, ವೈಯಕ್ತಿಕ ಶುಚಿತ್ವ ಮಕ್ಕಳ ಮೇಲಿನ ದೌರ್ಜನ್ಯ, ಬಾಲ್ಯ ವಿವಾಹ ತಡೆ ಹಾಗೂ ಬಾಲಗರ್ಭಿಣಿ ಸಮಸ್ಯೆಗಳು, ಸಂತಾನೋತ್ಪತ್ತಿ ಆರೋಗ್ಯದ ಕುರಿತು ಜಾಗೃತಿ ಕುರಿತಂತೆ ಪ್ರಮುಖ ವಿಷಯಗಳ ಮೇಲೆ ಆರೋಗ್ಯ ಶಿಕ್ಷಣ ಹಾಗೂ ಜಾಗೃತಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br>• ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮದಡಿ (RBSK) ರಾಜ್ಯದಾದ್ಯಂತ 430 ವೈದ್ಯಕೀಯ ತಂಡಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ತಂಡಗಳು ಅಂಗನವಾಡಿ ಕೇಂದ್ರಗಳು, ಶಾಲಾ- |

ಕಾಲೇಜುಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆಯನ್ನು ನಡೆಸಲಾಗುತ್ತಿದೆ. ಸದರಿ ತಪಾಸಣೆಯೊಂದಿಗೆ ತಂಡಗಳು ಮಕ್ಕಳು ಹಾಗೂ ಹದಿಹರೆಯದವರಿಗೆ ಲಿಂಗತಾರತಮ್ಯ, ಬಾಲ್ಯ ವಿವಾಹ ಒಳಗೊಂಡಂತೆ ಸಮಗ್ರ ಆರೋಗ್ಯದ ಕುರಿತಾಗಿ ಕೇಂದ್ರೀಕೃತ ಆಪ್ತ ಸಮಾಲೋಚನೆ ಮತ್ತು ಮಾಹಿತಿ ಒದಗಿಸುವ ಸೇವೆಗಳನ್ನು ಒದಗಿಸಲಾಗುತ್ತಿದೆ.

**ಮಕ್ಕಳ ನಿರ್ದೇಶನಾಲಯ ಬಾಲ್ಯ ವಿವಾಹ ತಡೆಗಟ್ಟಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ತೆಗೆದುಕೊಂಡಿರುವ ಕ್ರಮಗಳು**:

- ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ನ್ನು ಅನುಷ್ಠಾನಗೊಳಿಸಲು ಬಾಲ್ಯ ವಿವಾಹ ನಿಷೇಧ (ಕರ್ನಾಟಕ) ನಿಯಮಗಳು 2014 ಅನ್ನು ರಚಿಸಲಾಗಿದೆ.
- ಬಾಲ್ಯ ವಿವಾಹಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ತಡೆಗಟ್ಟಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016 ನ್ನು ಜಾರಿಗೆ ತರಲಾಗಿದೆ.
- ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಜಸ್ಟಿಸ್ ಶಿವರಾಜ್ ವಿ. ಪಾಟೀಲ್ ಇವರ ಅದ್ಯಕ್ಷತೆಯಲ್ಲಿ ಕೋರ್ ಕಮಿಟಿಯನ್ನು ರಚಿಸಿ ಸದರಿ ಕಮಿಟಿಯ ವರದಿಯಲ್ಲಿ ಮಾಡಲಾಗಿರುವ ಶಿಫಾರಸ್ಸುಗಳ ಅನುಷ್ಠಾನಕ್ಕಾಗಿ ಬಾಲ್ಯವಿವಾಹ ನಿಷೇಧ ಉಸ್ತುವಾರಿ ಕೋಶವನ್ನು ಸ್ಥಾಪಿಸಲಾಗಿದೆ. ಮುಂದುವರೆದು ಉಳಿದ ಶಿಫಾರಸ್ಸುಗಳನ್ನು ಸಹ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ.
- ಬಾಲ್ಯವಿವಾಹ, ಬಾಲಗರ್ಭಿಣಿ ಮತ್ತು ಫೋಕ್ಸೋ ಪ್ರಕರಣಗಳನ್ನು ತಡೆಯುವಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸಲು ರಾಜ್ಯ. ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳನ್ನು ರಚಿಸಲಾಗಿದೆ.
- ಬಾಲ್ಯವಿವಾಹ ತಡೆಯಲು ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತು ತಾಲ್ಲೂಕ ಮಟ್ಟದಲ್ಲಿ ತಹಶಿಲ್ದಾರ್ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದು ಸಮಿತಿಯಲ್ಲಿ ತ್ರೈಮಾಸಿಕವಾಗಿ ಸಭೆಯನ್ನು ನಡೆಸಿ ಜಿಲ್ಲಾ ಮತ್ತು ತಾಲ್ಲೂಕುವಾರು

| | | |
|---|---|---|
| | | ಪ್ರಕರಣಗಳ ಕುರಿತು ಪರಿಶೀಲನೆಯನ್ನು ಮಾಡಿ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಬಾಲ್ಯವಿವಾಹ ನಿಷೇಧ ನಿಯಮಗಳ ಅಡಿ ವಿವಿಧ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳನ್ನು ರಾಜ್ಯ, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮಮಟ್ಟದ ವರೆಗೆ ಒಟ್ಟು 58,200 ಕ್ಕೂ ಹೆಚ್ಚು ಬಾಲ್ಯ ವಿವಾಹ ನಿಷೇಧಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.<br>• ರಾಜ್ಯದಲ್ಲಿ ಬಾಲ್ಯವಿವಾಹ, ಬಾಲಗರ್ಭಿಣಿ ಮತ್ತು ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗಿದ್ದು, ಅದರಂತೆ ಅಗತ್ಯ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಸೂಚಿಸಲಾಗಿದೆ.<br>• ಬಾಲ್ಯ ವಿವಾಹಗಳನ್ನು ತಡೆಯುವ ಕಾರ್ಯಕ್ರಮಗಳ ನಿರ್ವಹಣೆ ಮತ್ತು ಸಮನ್ವಯಗೊಳಿಸಲು ಸಹಕಾರಿಯಾಗುವಂತೆ 'ವರ್ಧಿತ ಸುರಕ್ಷಿಣಿ' (NexGen Surakshini) ಪೋರ್ಟಲ್ ಮತ್ತು ಮೊಬೈಲ್ ಆಪ್ ಅನ್ನು ಮಕ್ಕಳ ಸಹಾಯವಾಣಿ 1098 ನೊಂದಿಗೆ ಸಮನ್ವಯಗೊಳಿಸಿ C-DAC ಸಂಸ್ಥೆಯ ಮೂಲಕ ಅಭಿವೃದ್ಧಿಗೊಳಿಸಲಾಗುತ್ತಿದೆ.<br>• ಮಕ್ಕಳ ಸಹಾಯವಾಣಿಯ (1098) ವ್ಯವಸ್ಥೆಯನ್ನು ಮಾಡಲಾಗಿದೆ. ರಾಜ್ಯದ ಯಾವುದೇ ಸ್ಥಳದಲ್ಲಿ ಯಾವುದೇ ಮಗುವೂ ಬಾಲ್ಯವಿವಾಹ, ಬಾಲಗರ್ಭಿಣಿ ಮತ್ತು ಪೋಕ್ಸೋ ಪ್ರಕರಣ ಸೇರಿದಂತೆ ಯಾವುದೇ ಸಮಸ್ಯೆಯಾದಲ್ಲಿ ಮಕ್ಕಳ ಸಹಾಯವಾಣಿಗೆ 1098 ಕ್ಕೆ ಕರೆ ಮಾಡಿದಲ್ಲಿ ತಕ್ಷಣ ಮಕ್ಕಳನ್ನು ರಕ್ಷಿಸಲು ಸಂಬಂಧಿಸಿದವರು ಕಾರ್ಯ ಪ್ರವೃತ್ತರಾಗುತ್ತಾರೆ.<br>• ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ಹೊಂದಿರುವ ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯತಿಗಳನ್ನು ಗುರುತಿಸಿ ಒಂದು ಗ್ರಾಮ ಪಂಚಾಯತಿಗೆ ಪ್ರಶಸ್ತಿ ಮೊತ್ತ ರೂ.25,000/- ಗಳಂತೆ ನೀಡಲು ಕ್ರಮವಹಿಸಲಾಗುತ್ತಿದೆ.<br>• ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮಮಟ್ಟದಲ್ಲಿ ಬಾಲ್ಯವಿವಾಹಗಳ ದುಷ್ಪರಿಣಾಮಗಳನ್ನು ತಡೆಗಟ್ಟಲು ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರಾಗುವುದನ್ನು ಮತ್ತು ಪೋಕ್ಸೋ ಪ್ರಕರಣಗಳನ್ನು |

| | | |
|---|---|---|
| | | ನಿಯಂತ್ರಿಸಲು ಸಾರ್ವಜನಿಕರಿಗೆ ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>• ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟುವ ಕುರಿತಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರಿಂದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಅಗತ್ಯ ಕ್ರಮವಹಿಸಲು ಪತ್ರ ಬರೆಯಲಾಗಿದೆ.<br>• ಬಾಲ್ಯವಿವಾಹದ ಪ್ರಯತ್ನ. ಸಿದ್ಧತೆ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ. 2006ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಪೊಲೀಸರಿಂದ ಸಾಧ್ಯವಾಗುತ್ತಿಲ್ಲ, ಹೀಗಾಗಿ ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) 2025ರ ಮಸೂದೆಯನ್ನು ಜಾರಿಗೆ ತರುವ ಅವಶ್ಯಕತೆಯಿರುತ್ತದೆ. ಈ ಹಿನ್ನೆಲೆಯಲ್ಲಿ ಕರಡು ತಿದ್ದುಪಡಿ ಮಸೂದೆಯನ್ನು ರೂಪಿಸಲಾಗಿದ್ದು, ಇದಕ್ಕೆ ಸಚಿವ ಸಂಪುಟದ ಅನುಮೋದನೆ ನೀಡಲಾಗಿದೆ.<br>• ರಾಜ್ಯಮಟ್ಟದಲ್ಲಿ ಬಾಲ್ಯವಿವಾಹ ತಡೆಗಟ್ಟಲು "ವಾತ್ಸಲ್ಯ ವಾಣಿ" ಎಂಬ ಸರಣಿ ಕಾರ್ಯಕ್ರಮವನ್ನು ಆಕಾಶವಾಣಿಯಲ್ಲಿ ಬಿತ್ತರಿಸಲಾಗಿದೆ.<br>• ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ KSRTC ಮತ್ತು BMTC ಬಸ್ಸುಗಳಲ್ಲಿ ಬಸ್ ಬ್ರಾಂಡಿಂಗ್ ಹಾಗೂ ವಿವಿಧ ಹಂತಗಳಲ್ಲಿ ಜಾಗೃತಿ/ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಿದ್ಧಪಡಿಸಲಾದ ಕ್ರಿಯಾ ಯೋಜನೆಯಂತೆ ತರಬೇತಿಗಳನ್ನು ಆಯೋಜಿಸಲು ಮತ್ತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಹಾಗೂ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಕ್ರಮವಹಿಸಲು ತಿಳಿಸಲಾಗಿದೆ. |

ಸಂಖ್ಯೆ: ಆಕುಕ 92 ಎಸ್.ಟಿ.ಕ್ಯೂ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು